ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – 560 002

ಸಂಖ್ಯೆ: BBMP/Add.Dir/JD North/LP/0116/2013-14 ದಿನಾಂಕ: 12-06-2019.

# ಪ್ರಾರಂಭಿಕ ಪ್ರಮಾಣಪತ್ರ (ಭಾಗಶಃ)

ವಿಷಯ: ಆಸ್ತಿ ಖಾತಾ ಸಂಖ್ಯೆ. 58/1/709/801/502, ಕೊಡಿಗೇಹಳ್ಳಿ ಉಪವಿಭಾಗ, ಹೆಬ್ಬಾಳ ಉತ್ತರ, ವಾರ್ಡ್ ನಂ. 07, ಯಲಹಂಕ ವಲಯ, ಬೆಂಗಳೂರು ಇಲ್ಲಿನ ಸ್ವತ್ತಿನಲ್ಲಿ ನಿರ್ಮಿಸುತ್ತಿರುವ ವಾಣಿಜ್ಯ (ಹೋಟೆಲ್) ಉಪಯೋಗದ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ (ಭಾಗಶಃ) ನೀಡುವ ಬಗ್ಗೆ.

ಉಲ್ಲೇಖ: 1) ಪ್ರಾರಂಭಿಕ ಪ್ರಮಾಣಪತ್ರ ಕೋರಲಾದ ತಮ್ಮ ಮನವಿ ಪತ್ರ ದಿನಾಂಕ: 21-05-2019.

2) ಪರಿಷ್ಕೃತ ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/JD North/LP/0116/2013-14, ದಿನಾಂಕ: 05-02-2018.

* * * * * * *

ಆಸ್ತಿ ಖಾತಾ ಸಂಖ್ಯೆ. 58/1/709/801/502, ಕೊಡಿಗೇಹಳ್ಳಿ ಉಪವಿಭಾಗ, ಹೆಬ್ಬಾಳ ಉತ್ತರ, ವಾರ್ಡ್ ನಂ. 07, ಯಲಹಂಕ ವಲಯ, ಬೆಂಗಳೂರು ಇಲ್ಲಿರುವ ಸ್ವತ್ತಿನಲ್ಲಿ 4ತಳ+ನೆಲ+ಮೇಲಿನ 12 ಅಂತಸ್ತಿನ ವಾಣಿಜ್ಯ (ಹೋಟೆಲ್) ಮತ್ತು 3ತಳ+ನೆಲ+ಮೇಲಿನ 10 ಅಂತಸ್ತುಗಳ ವಾಣಿಜ್ಯ (ಕಛೇರಿ) ಉಪಯೋಗದ ಕಟ್ಟಡ ನಿರ್ಮಾಣಕ್ಕೆ ಉಲ್ಲೇಖ (2) ರಂತೆ ಈ ಕಛೇರಿಯಿಂದ ದಿನಾಂಕ: 05-02-2018 ರಂದು ಪರಿಷ್ಕೃತ ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ. ಮಂಜೂರಾದ ಕಟ್ಟಡಗಳ ಪೈಕಿ 4ತಳ+ನೆಲ+ಮೇಲಿನ 12 ಅಂತಸ್ತುಗಳ ವಾಣಿಜ್ಯ (ಹೋಟೆಲ್) ಉಪಯೋಗದ ಕಟ್ಟಡ ನಿರ್ಮಾಣಕ್ಕೆ ಮಾತ್ರ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಉಲ್ಲೇಖ (1) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ ಕಟ್ಟಡ ನಿರ್ಮಾಣದ ಸ್ಥಳವನ್ನು ಪರಿಶೀಲಿಸಲಾಗಿ, ಪರಿಷ್ಕೃತ ಮಂಜೂರಾತಿ ನಕ್ಷೆಯನ್ವಯ ಕಟ್ಟಡ ನಿರ್ಮಾಣ ಪ್ರಾರಂಭಿಸಿದ್ದು, ವಾಣಿಜ್ಯ (ಕಛೇರಿ) ಉಪಯೋಗದ ಕಟ್ಟಡ ನಿರ್ಮಾಣ ಕಾರ್ಯ ಪ್ರಗತಿಯಲ್ಲಿರುವುದನ್ನು ಪರಿವೀಕ್ಷಿಸಲಾಗಿದೆ.

ಅಪರ ನಿರ್ದೇಶಕರು (ನಗರ ಯೋಜನೆ) ರವರು ಸದರಿ ವಾಣಿಜ್ಯ (ಹೋಟೆಲ್) ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 01-06-2019 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ಶುಲ್ಕ ರೂ. 4,44,000/- ಗಳಿಗೆ ಡಿ.ಡಿಯನ್ನು ಸಲ್ಲಿಸಿದ್ದು, ಈ ಕಛೇರಿಯ ರಶೀದಿ ಸಂಖ್ಯೆ: RE-ifms 331-TP/000107 ದಿನಾಂಕ: 11-06-2019 ರಲ್ಲಿ ಸಂಬಂಧಿಸಿದ ಲೆಕ್ಕ ಶೀರ್ಷಿಕೆಗೆ ಸಂದಾಯ ಮಾಡಿಕೊಳ್ಳಲಾಗಿದೆ. ಆದುದರಿಂದ ವಾಣಿಜ್ಯ (ಕಛೇರಿ) ಉಪಯೋಗದ ಕಟ್ಟಡ ನಿರ್ಮಾಣಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರ (ಭಾಗಶಃ) ವನ್ನು ನೀಡಲಾಗಿದೆ.

**ಷರತ್ತುಗಳು**

1. ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
3. ಮಂಜೂರಾತಿಯ ಸಿಂಧುತ್ವವು ಉಲ್ಲೇಖ (3) ರಂತೆ ಅನುಮೋದನೆ ನೀಡಿದ ದಿನಾಂಕದಿಂದ 5 ವರ್ಷಗಳ ಅವಧಿಗೆ ಮಾನ್ಯತೆ ಹೊಂದಿದ್ದು, ಈ ಅವಧಿಯೊಳಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.

4. ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ-ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.
5. ಅಂತಿಮ ಪ್ರಾರಂಭಿಕ ಪ್ರಮಾಣಪತ್ರ ಪಡೆಯುವ ಮುನ್ನ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪರಿಷ್ಕೃತ ನಿರಾಕ್ಷೇಪಣಾ ಪತ್ರ, ಭಾರತೀಯ ವೈಮಾನಿಕ ಪ್ರಾಧಿಕಾರದಿಂದ ಪಡೆದಿರುವ ಶುದ್ಧಿ ಪತ್ರ (Corrigendum) ಮತ್ತು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಪಡೆದಿರುವ ನಿರಾಕ್ಷೇಪಣಾ ಪತ್ರಗಳನ್ನು ಹಾಗೂ ರಸ್ತೆ ಅಗಲೀಕರಣಕ್ಕಾಗಿ ಕಾಯ್ದಿರಿಸಿದ 224.73 ಚ.ಮೀ ಪ್ರದೇಶವನ್ನು ಪರಿತ್ಯಾಜನಾ ಪತ್ರದ ಮುಖಾಂತರ ಪಾಲಿಕೆಗೆ ಹಸ್ತಾಂತರಿಸಿರುವ ನೊಂದಾಯಿತ ಪ್ರತಿಯನ್ನು ಸಲ್ಲಿಸುವುದು.
6. ವಿವಿಧ ಇಲಾಖೆಗಳಿಂದ ನೀಡಿರುವ ನಿರಾಕ್ಷೇಪಣಾ ಪತ್ರಗಳಲ್ಲಿ ವಿಧಿಸಿರುವ ಷರತ್ತನ್ನು ಪಾಲಿಸತಕ್ಕದ್ದು.

ಸಹಿ /-

ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೆ,

M/s S V Enterprises
# 21, Kaveri Nilaya, Middle School Road,
VV Puram, Bengaluru - 560004.

ಪ್ರತಿಯನ್ನು:

1. ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ವಿಭಾಗ) / ಸಹಾಯಕ ಕಾರ್ಯಪಾಲಕ ಅಭಿಯಂತರರು (ಕೊಡಿಗೇಹಳ್ಳಿ ಉಪ-ವಿಭಾಗ) ರವರಿಗೆ ಮಾಹಿತಿಗಾಗಿ.
2. ಕಛೇರಿ ಪ್ರತಿ.

B.R. Muddu Raj 12/6/19

ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

12/6/19 12/6/19 12/6/19